(ಗೊಂದಲ)

ಶ್ರೀ ಸಿದ್ದರಾಮಯ್ಯ : ಇದು ಸರ್ವಾಧಿಕಾರಿ ಧೋರಣೆ. This is too much.

(ಗೊಂದಲ)

ಅಧ್ಯಕ್ಷರು : ಈಗ ಸದನವನ್ನು 17ನೇ ಮಾರ್ಚ್ 2010 ರಂದು ಬುಧವಾರ ಬೆಳಿಗ್ಗೆ 11.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಮಧ್ಯಾಹ್ನ 3.50 ಕ್ಕೆ ಮುಕ್ತಾಯಗೊಂಡು ಪುನಃ ದಿನಾಂಕ: 17ನೇ ಮಾರ್ಚ್ 2010ರ ಬುಧವಾರ ಬೆಳಗ್ಗೆ 11.00 ಗಂಟೆಗೆ ಸೇರಲು ನಿಶ್ಚಯಿಸಿತು)

* * * * * *

10. ಅನುಬಂಧ – 1

ರಸ್ತೆ ನಿರ್ಮಾಣ

481 (987) ಶ್ರೀ ಅಭಯಚಂದ್ರ ಜೈನ್. ಕೆ. (ಮೂಡಬಿದ್ರೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೂಡಬಿದರೆ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಶಿರ್ತಾಡಿಕಜ್ಜೆಯಿಂದ ಹೊಸ ಅಂಗಡಿಯವರೆಗೆ ರಸ್ತೆ ನಿರ್ಮಾಣ ಮಾಡಲು ನಾಲ್ಕು ವರ್ಷಗಳ ಹಿಂದೆ ಮಂಜೂರಾತಿಯಾಗಿದ್ದು, ಇದುವರೆಗೂ ಕಾಮಗಾರಿ ಪ್ರಾರಂಭಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕಾಮಗಾರಿ ಪ್ರಾರಂಭಿಸಲು ವಿಳಂಬಕ್ಕೆ ಕಾರಣಗಳೇನು (ವಿವರ ಒದಗಿಸುವುದು);

ಇ) ಈ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಮೂಡಬಿದರೆ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಶಿರ್ತಾಡಿಕಜ್ಜೆಯಿಂದ ಹೊಸ ಅಂಗಡಿಯವರೆಗಿನ ರಸ್ತೆಗೆ ನಾಲ್ಕು ವರ್ಷಗಳ ಹಿಂದೆ ಯಾವುದೇ ಅಂದಾಜು ಮಂಜೂರಾತಿ ಆಗಿರುವುದಿಲ್ಲ. ಆದ್ದರಿಂದ ಕಾಮಗಾರಿ ಪ್ರಾರಂಭಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಮುಂದಿನ ಸಾಲಿನ ವರ್ಷದಲ್ಲಿ ಲಭ್ಯವಾಗುವ ಅನುದಾನದಲ್ಲಿ ಆದ್ಯತೆ ಮೇಲೆ ಕಾಮಗಾರಿಯನ್ನು ತೆಗೆದುಕೊಳ್ಳಬಹುದಾಗಿದೆ.

ನಿರ್ಬಂಧಿತ ಪ್ರದೇಶದ ನಿಯಮ ಸಡಿಲಿಸುವುದು

482 (631) ಶ್ರೀ ಆನಂದ ಸಿಂಗ್ (ವಿಜಯನಗರ–ಬಳ್ಳಾರಿ) : ಮಾನ್ಯ ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಬ್ಬು ಬೆಳೆ ನಿಯಂತ್ರಣ ಕಾಯ್ದೆಯಲ್ಲಿ ಕಬ್ಬು ಬೆಳೆ ಪ್ರದೇಶವನ್ನು ನಿರ್ಬಂಧಿತ ಪ್ರದೇಶವೆಂದು ಘೋಷಿಸಿದ್ದು ಕಬ್ಬು ಬೆಳೆಯುವ ರೈತರು ಸ್ವತಃ ತಾವು ಬೆಳೆದ ಕಬ್ಬನ್ನು ಮುಕ್ತವಾಗಿ ಮಾರಾಟ ಮಾಡುವ ಹಕ್ಕಿನಿಂದ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೆ;

ಆ) ಬಂದಿದ್ದಲ್ಲಿ ರೈತರ ಹಿತದೃಷ್ಟಿಯಿಂದ ಕಬ್ಬು ಬೆಳೆ ಪ್ರದೇಶವನ್ನು ನಿರ್ಬಂಧಿತ ಪ್ರದೇಶವೆಂದು ಘೋಷಿಸುವ ನಿಯಮವನ್ನು ಸಡಿಲಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಇ) ಹಾಗಿದ್ದಲ್ಲಿ ಎಂದಿನಿಂದ ಜಾರಿಗೊಳಿಸಲಾಗುವುದು?

ಶ್ರೀ ಶಿವರಾಜ್ ಎಸ್. ತಂಗಡಗಿ (ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು) :

ಅ) ಹೌದು, ಕೆಲವು ರೈತ ಸಂಘಟನೆಗಳಿಂದ ಈ ಬೇಡಿಕೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ನಿರ್ಬಂಧಿತ ಪ್ರದೇಶವೆಂದು ಘೋಷಿಸುವ ನಿಯಮವನ್ನು ಸಡಿಲಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. ಕರ್ನಾಟಕದಲ್ಲಿ, ಬೇರೆ ರಾಜ್ಯಗಳಲ್ಲಿ ಇರುವಂತೆ, ಪ್ರತಿ ಕಾರ್ಖಾನೆಗೂ ತನ್ನದೇ ಆದ ಮೀಸಲು ಕ್ಷೇತ್ರ ಇರುತ್ತದೆ. ರಾಜ್ಯವು ಕಬ್ಬು ಅಭಿವೃದ್ಧಿ, ಕಬ್ಬು ಸಾಗಾಣಿಕೆ, ಕಬ್ಬಿನ ಬೆಲೆ ಈ ಎಲ್ಲಾ ವಿಷಯವನ್ನು ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರದ ಕಬ್ಬು (ನಿಯಂತ್ರಣ) ಕಾಯ್ದೆ 1966 ಇದನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸ ಬೇಕಾಗಿದೆ. ಈ ಕಾಯಿದೆಯ ಕಲಂ 6(1) (ಎ) (ಬಿ) (ಸಿ) (ಡಿ) (ಇ) ಅಡಿಯಲ್ಲಿ ಕಬ್ಬನ್ನು ಕೊಳ್ಳುವ ಸಂಬಂಧವಾಗಿ ನಿಯಮ ರೂಪಿಸಿರುತ್ತದೆ. ಅದರಂತೆ ಪ್ರತಿಯೊಂದು ಸಕ್ಕರೆ ಕಾರ್ಖಾನೆಯು ಸಾಮರ್ಥ್ಯಕ್ಕೆ ತಕ್ಕಂತೆ